# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 558 (602)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಗಣಿಗಾರಿಕೆಗೆ ಬಳಸುವ ಜಿಲೆಟಿನ್ ಕಡ್ಡಿಗಳ ಕುರಿತು

(ಅ) ಗಣಿಗಾರಿಕೆಗೆ ಬಳಸುವ ಜಿಲೆಟಿನ್ ಕಡ್ಡಿ, ಡೈನಮೈಟ್ ಸೇರಿದಂತೆ ಸ್ಫೋಟಕಗಳನ್ನು ಮಾರಾಟ ಮಾಡಲು ಎಷ್ಟು ಮಾರಾಟಗಾರರಿಗೆ ಅನುಮತಿ ನೀಡಲಾಗಿದೆ; ಅನುಮತಿ ನೀಡಲು ಇರುವ ಮಾನದಂಡಗಳೇನು; ಜಿಲ್ಲೆಯಲ್ಲಿ ಈ ವ್ಯವಹಾರಕ್ಕೆ ಅನುಮತಿ ನೀಡುವ ಸಕ್ಷಮ ಅಧಿಕಾರಿ ಯಾರು;

(ಆ) ಬೆಂಗಳೂರು ನಗರದಲ್ಲಿ ಕಳೆದ ಎರಡು ವರ್ಷಗಳಲ್ಲಿ ಜಿಲೆಟಿನ್ ಕಡ್ಡಿ, ಡೈನಮೈಟ್ ಸೇರಿದಂತೆ ಸ್ಫೋಟಕಗಳನ್ನು ಮಾರಾಟಗಾರರು ಯಾವ ವ್ಯಕ್ತಿಗಳಿಗೆ ಮಾರಾಟ ಮಾಡಿದ್ದಾರೆ;

(ಇ) ಜಿಲೆಟಿನ್ ಕಡ್ಡಿ, ಡೈನಮೈಟ್ ಸೇರಿದಂತೆ ಸ್ಫೋಟಕಗಳನ್ನು ಸಂಗ್ರಹಿಸಿ ಇಡಲು ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳೇನು; ಈ ವಸ್ತುಗಳ ಮಾರಾಟಗಾರರು ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡಿರುವ ಬಗ್ಗೆ ಪರಿಶೀಲಿಸುವ ಅಧಿಕಾರ ಯಾರಿಗಿದೆ?